**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ,**

**ಮುಳಬಾಗಿಲು.**

**ಸಿ. ಸಿ. ಸಂಖ್ಯೆ 1629/2024**

ದಿನಾಂಕಃ 12.03.2026

| | | |
|---|---|---|
| ಹೆಸರುಃ | ನವೀನ್ | ಸಿ.ಡಬ್ಲ್ಯೂಃ 03 |
| ತಂದೆಯ ಹೆಸರು | ವೆಂಕಟರಾಮಪ್ಪ | ಪಿ. ಡಬ್ಲ್ಯೂಃ 01 |
| ವಯಸ್ಸು | 36 ವರ್ಷ | |
| ಕೆಲಸ | ಕೂಲಿ | ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ | ಮಿಂಡಳ್ಳಿ ಗ್ರಾಮ | |

**ಮುಖ್ಯ ವಿಚಾರಣೆಃ ಮಾನ್ಯ ಎ.ಪಿ.ಪಿ ರವರಿಂದಃ**

ಮೃತ ಚಾಸಾ–1 ನನ್ನ ತಂಗಿ, ಚಾಸಾ–2 ನನ್ನ ಚಿಕ್ಕಪ್ಪ, ಚಾಸಾ–4 ಅಜ್ಜ ಹಾಗೂ ನ್ಯಾಯಾಲಯದ ಮುಂದೆ ಇರುವ 2 ನೇ ಆರೋಪಿ ನನ್ನ ಮಾವ.

1 ಮತ್ತು 3 ನೇ ಆರೋಪಿತರು ಗೈರು ಹಾಜರು ಇದ್ದು ಅವರ ಗುರುತಿಸುವಿಕೆಯಲ್ಲಿ ತಕರಾರು ಇಲ್ಲ ಎಂದು ಅವರ ಪರ ವಕೀಲರು ವಿನಾಯಿತಿ ಅರ್ಜಿಯನ್ನು ಸಲ್ಲಿಸಿರುತ್ತಾರೆ.

ಪ್ರಕರಣದ ಕುರಿತು ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಘಟನೇಯನ್ನು ಕಣ್ಣಾರೆ ಕಂಡಿರುವುದಿಲ್ಲ. ಈ ಕುರಿತು ನಾನು ಪೋಲಿಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

***ಪಾಟೀ ಸವಾಲುಃ ಮಾನ್ಯ ಎ.ಪಿ.ಪಿ ರವರಿಂದಃ***

ಸುಮಾರು 7 ವರ್ಷಗಳ ಹಿಂದೆ ಚಾಸಾ-1 ಮೀನಾಕ್ಷಿಯನ್ನು ಕೋಲಾರ ತಾಲೂಕಿನ ಕಾಜಿಕಳ್ಳಿ ಗ್ರಾಮದ ಪ್ರದೀಪ್ ರವರಿಗೆ ಕೊಟ್ಟು ಮದುವೆ ಮಾಡಲಾಗಿತ್ತು

ಎಂದರೆ ಸರಿ. ಅವರಿಗೆ ಇಬ್ಬರೂ ಗಂಡು ಮಕ್ಕಳು ಇದ್ದಾರೆ ಎಂದರೆ ಸರಿ. ತದನಂತರ ವಿನಾಕಾರಣ ಸದರಿ ಪ್ರದೀಪ್ ಮೀನಾಕ್ಷಿಯ ಮೇಲೆ ಜಗಳ ತೆಗೆದು ಮಾನಸಿಕ ಹಾಗೂ ದೈಹಿಕ ಹಿಂಸೆ ನೀಡುತ್ತಿದ್ದನ್ನು ಎಂದರೆ ಸರಿಯಲ್ಲ. ಆದ್ದರಿಂದ ಮೀನಾಕ್ಷಿ ತನ್ನ ಮಕ್ಕಳೊಂದಿಗೆ ತವರು ಮನೆಗೆ ಬಂದು ನೆಲೆಸಿದ್ದಳು ಎಂದರೆ ಸರಿಯಲ್ಲ.

ದಿ. 28.12.2023 ರಂದು ಮದ್ಯಾಹ್ನ 3.00 ಗಂಟೆ ಸಮಯದಲ್ಲಿ ನಾನು ನಮ್ಮ ಮನೆಯ ಹತ್ತಿರ ಇದ್ದಾಗ ಆರೋಪಿತರು ಅಲ್ಲಿಗೆ ಬಂದು ಜಗಳ ತೆಗೆದು ಅವಾಚ್ಯ ಶಬ್ದಗಳಿಂದ ಬೈದು ಕೈ ಕಾಲುಗಳಿಂದ ಹಲ್ಲೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅದಲ್ಲದೇ ಆರೋಪಿತರು ಮೀನಾಕ್ಷಿಗೆ ಪ್ರಾಣದ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಗಲಾಟೆಯನ್ನು ಬಿಡಿಸಿರುತ್ತೇನೆಂದರೆ ಸರಿಯಲ್ಲ. ಈ ಕುರಿತು ಈಗ ಓದಿ ಹೇಳಿದಂತೆ ಹೇಳಿಕೆ ನೀಡಿದ್ದೆನೆಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-1 ಎಂದು ಗುರುತಿಸಲಾಯಿತು.

ಆರೋಪಿತರು ನನ್ನ ಮಾವನಾಗಿರುವ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

***ಮರುವಿಚಾರಣೆಃ** ಇಲ್ಲ.*

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

(ಗೌಡ ಜಗದೀಶ ರುದ್ರೇ)
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ ಮುಳಬಾಗಿಲು.